# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ:ತುವಿ:ಸಾ&ಅ:ಸಾ.ಕ:2022–23 /2855 ದಿನಾಂಕ:12.08.2022

## : ಸುತ್ತೋಲೆ :

**ವಿಷಯ:** ರಾಜ್ಯಮಟ್ಟದ ರೋವರ್ಸ್ ಮತ್ತು ರೇಂಜರ್ಸ್ ಸ್ಕೌಟ್ಸ್ ಲೀಡರ್ಸ್‌ಗಳ ಮೂಲ ತರಬೇತಿ ಶಿಬಿರಕ್ಕೆ ಉಪನ್ಯಾಸಕರನ್ನು ನಿಯೋಜಿಸುವ ಕುರಿತು.

**ಉಲ್ಲೇಖ:** 1. ಜಿಲ್ಲಾ ಆಯುಕ್ತರು (ಸ್ಕೌಟ್ಸ್), ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆ, ತುಮಕೂರು ಇವರ ಮನವಿ ಪತ್ರ ದಿನಾಂಕ:28.07.2022
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:11.08.2022

* * * * *

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ ಕರ್ನಾಟಕದ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕದ ವತಿಯಿಂದ ರಾಜ್ಯ ಮಟ್ಟದ ರೋವರ್ ಸ್ಕೌಟ್ಸ್ ಲೀಡರ್ಸ್ ಮತ್ತು ರೇಂಜರ್ ಲೀಡರ್ಸ್‌ಗಳಿಗೆ ಮೂಲ ತರಬೇತಿ ಶಿಬಿರವನ್ನು ದಿನಾಂಕ:22.08.2022 ರಿಂದ 28.08.2022 ರವರೆಗೆ ಡಾ. ಅನಿಬೆಸೆಂಟ್ ಸ್ಕೌಟ್-ಗೈಡ್ ರಾಜ್ಯ ತರಬೇತಿ ಮತ್ತು ಶಿಬಿರ ಕೇಂದ್ರ, ದೊಡ್ಡಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ ಆಯೋಜಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಸೂಚಿತ ರಾಜ್ಯಮಟ್ಟದ ತರಬೇತಿ ಶಿಬಿರಕ್ಕೆ ವಿಶ್ವವಿದ್ಯಾನಿಲಯದ ಘಟಕ ಹಾಗೂ ಸಂಯೋಜಿತ ಕಾಲೇಜುಗಳಲ್ಲಿನ ಉಪನ್ಯಾಸಕ/ಉಪನ್ಯಾಸಕಿಯರನ್ನು ಕಡ್ಡಾಯವಾಗಿ ನಿಯೋಜಿಸಿ, ಸದರಿ ಉಪನ್ಯಾಸಕರ ವಿವರಗಳನ್ನು ದಿನಾಂಕ:16.08.2022 ರೊಳಗಾಗಿ ಜಿಲ್ಲಾ ಆಯುತ್ತರು, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಜಿಲ್ಲಾ ಸಂಸ್ಥೆ, ತುಮಕೂರು (ಮೊ:97403 08396) ಇವರಿಗೆ ಸಲ್ಲಿಸುವಂತೆ ತಿಳಿಸಲಾಗಿದೆ.

ಆದೇಶದ ಮೇರೆಗೆ

Ramu Reddy 12/8/22

ಉಪಕುಲಸಚಿವರು
ಉಪಕುಲಸಚಿವರು
(ಸಾಮಾನ್ಯ ವಿಭಾಗ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ

1. **ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು.**
2. **ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಕಲಾ ಕಾಲೇಜು, ತುಮಕೂರು.**
3. **ಪ್ರಾಂಶುಪಾಲರು, ಎಲ್ಲಾ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**

**ಪ್ರತಿಗಳು:**

1. ಜಿಲ್ಲಾ ಆಯುಕ್ತರು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆ, ಕಂಠೀರವ ಸ್ಕೌಟ್ಸ್ ಗೈಡ್ಸ್ ಭವನ, ಗಾಂಧಿನಗರ, ತುಮಕೂರು – 572 102
2. ಸಂಯೋಜಕರು, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಘಟಕ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು: **(ವಿವಿ ಜಾಲತಾಣದಲ್ಲಿ ಭಿತ್ತರಿಸುವಂತೆ ಹಾಗೂ ಘಟಕ & ಸಂಯೋಜಿತ ಕಾಲೇಜುಗಳಿಗೆ ಸಂದೇಶವನ್ನು ಕಳುಹಿಸುವಂತೆ ಸೂಚಿಸಿದೆ)**
5. ಕಚೇರಿ ಪ್ರತಿ.

ಸಿಆರ್